ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮೇಲ್ದರ್ಜೆಗೇರಿಸುವುದು

2793 (3557), ಶ್ರೀ ಗೋವಿಂದ ಎಂ.ಕಾರಜೋಳ (ಮುಧೋಳ)

ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಒಟ್ಟು ಸಂಖ್ಯೆ ಎಷ್ಟು;

ಆ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಿ, ದ್ವಿತೀಯ ವರ್ಷದ ಪಿ.ಯು.ಸಿ. ವರೆಗೆ ತರಗತಿಗಳನ್ನು ಪ್ರಾರಂಭಿಸಲು ಸಾರ್ವಜನಿಕರು ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ಯಾವಾಗ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಲಾಗುವುದು;

ಈ) ಹಾಗಿದ್ದರೆ, ಎಷ್ಟು ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 402 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.

ಆ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಿ, ದ್ವಿತೀಯ ವರ್ಷದ ಪಿ.ಯು.ಸಿ. ತರಗತಿಯ ವರೆಗೆ ಏರಿಸಲು ಯಾವುದೇ ಪ್ರಸ್ತಾವನೆ ಇಲ್ಲ.

ಇ) ಮತ್ತು ಈ)

ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ 250 ವಿದ್ಯಾರ್ಥಿಗಳಿಗೆ ಸೀಮಿತವಾಗಿ ಪ್ರಾರಂಭಿಸಲು ಅನುಮೋದಿಸಲಾಗಿದೆ. ಈ ವಸತಿ ಶಾಲೆಗಳನ್ನು ಮೇಲ್ದರ್ಜೆಗೆ ಏರಿಸುವ ಉದ್ದೇಶ ಸರ್ಕಾರಕ್ಕೆ ಇರುವುದಿಲ್ಲ.

ಆ) ರಾಜ್ಯದಲ್ಲಿ 29 ಪದವಿ ಪೂರ್ವ ವಸತಿ ಸಹಿತ ಕಾಲೇಜುಗಳನ್ನು ಪ್ರತ್ಯೇಕವಾಗಿ ಪ್ರಾರಂಭಿಸಿರುವುದರಿಂದ, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ದ್ವಿತೀಯ ಪಿ.ಯು.ಸಿ. ತರಗತಿಗಳನ್ನು ಪ್ರಾರಂಭಿಸುವುದು ಸಮಂಜಸವಲ್ಲ.

ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಂಸ್ಥೆಗಳ ಸ್ಥಾಪನೆ

2795 (4038), ಶ್ರೀ ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಂಸ್ಥೆಗಳ ಸ್ಥಾಪನೆಗಾಗಿ ಅನುಮತಿಯನ್ನು ಕೋರಿ ರಾಜ್ಯ ಸರ್ಕಾರಕ್ಕೆ ಬಂದಿದ್ದ ಅರ್ಜಿಗಳೆಷ್ಟು (ಈ ಅರ್ಜಿಗಳನ್ನು ಸಲ್ಲಿಸಿದ್ದವರ ಹೆಸರು ವಿವರಗಳೇನು ಒದಗಿಸುವುದು);

ಆ) ಈ ಪೈಕಿ ಎಷ್ಟು ಅರ್ಜಿಗಳಿಗೆ ಮಂಜೂರಾತಿಯನ್ನು ನೀಡಲಾಗಿದೆ; ಮತ್ತು ಎಷ್ಟು ಅರ್ಜಿಗಳನ್ನು ಯಾವ ಕಾರಣಗಳಿಗಾಗಿ ತಿರಸ್ಕರಿಸಲಾಗಿದೆ; (ಮಂಜೂರಾತಿ ಪಡೆದ ಮತ್ತು ತಿರಸ್ಕೃತಗೊಮಡ ಅರ್ಜಿಗಳ ಸಮಗ್ರ ಮಾಹಿತಿಯನ್ನು ಒದಗಿಸುವುದು);

ಇ) ಈ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಈ ಸಂಸ್ಥೆಗಳು ಸ್ಥಾಪನೆಗೊಂಡಿವೆ; ಇವುಗಳಿಂದ ಇಷ್ಟು ಉದ್ಯೋಗಗಳು ಸೃಷ್ಟಿಯಾಗಿವೆ; ಈ ಪೈಕಿ ಹೈದ್ರಾಬಾದ್–ಕರ್ನಾಟಕ ಪ್ರದೇಶ ವ್ಯಾಪ್ತಿಯ ಯಾವ ಯಾವ ಜಿಲ್ಲೆಗಳಲ್ಲಿ ಈ ಸಂಸ್ಥೆಗಳು ಸ್ಥಾಪನೆಗೊಂಡಿವೆ;

ಈ) ಈ ಸಂಸ್ಥೆಗಳನ್ನು ಸ್ಥಾಪಿಸಲು ಮುಂದೆ ಬರುವ ವ್ಯಕ್ತಿಗಳು ಮತ್ತು ಸಂಸ್ಥೆಗಳಿಗೆ ಸರ್ಕಾರ ಯಾವ ಯಾವ ಅನುಕೂಲಗಳನ್ನು, ರಿಯಾಯಿತಿಗಳನ್ನು ನೀಡುತ್ತಿವೆ; ಹಿಂದುಳಿದ ಬೀದರ್ ಜಿಲ್ಲೆಯಲ್ಲಿ